# All India Radio: Bangalore
## Regional Bulletin In Kannada
## 06.10.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಎರಡು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಕೆಮ್ಮು ಸಿರಪ್ ನೀಡುವಂತಿಲ್ಲ - ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ
- ಕೊಪ್ಪಳದಲ್ಲಿ ೨ ಸಾವಿರ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಶಂಕು ಸ್ಥಾಪನೆ
- ರಾಜ್ಯದಲ್ಲಿ ೧೮ಸಾವಿರದ ೫೦೦ಕ್ಕೂ ಅಧಿಕ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಸಿದ್ಧತೆ - ಸಚಿವ ಮಧುಬಂಗಾರಪ್ಪ
- ಬೆಂಗಳೂರಿನಲ್ಲಿ ದಕ್ಷಿಣ ವಲಯದ ವಕ್ಫ್ ಮಂಡಳಿಗಳಿಂದ ಉಮಿದ್ ಪರಿಶೀಲನಾ ಸಭೆ
- ರಾಜ್ಯದ ಎಲ್ಲಾ ಸಮುದಾಯ, ಧರ್ಮಗಳನ್ನು ರಕ್ಷಿಸುವುದು ಸರ್ಕಾರದ ಕರ್ತವ್ಯ - ಬಿ.ವೈ.ವಿಜಯೇಂದ್ರ

**************

ಮಧ್ಯಪ್ರದೇಶದಲ್ಲಿ ಕೆಮ್ಮಿನ ಸಿರಪ್ ಕುಡಿದು ಮಕ್ಕಳು ಸಾವನ್ನಪ್ಪಿದ ಬಳಿಕ ರಾಜ್ಯ ಆರೋಗ್ಯ ಇಲಾಖೆ ಎಚ್ಚೆತ್ತುಕೊಂಡಿದೆ. ಇಂದು ಮಹತ್ವದ ಸಭೆ ನಡೆಸಿ ಕೆಮ್ಮಿನ ಸಿರಪ್ ಬಳಕೆಗೆ ಮಾರ್ಗಸೂಚಿ ಬಿಡುಗಡೆ ಮಾಡಿದೆ. ಆರೋಗ್ಯ ಇಲಾಖೆ ಮಾರ್ಗಸೂಚಿಯ ಪ್ರಕಾರ, ೨ ವರ್ಷದೊಳಗಿನ ಮಕ್ಕಳಿಗೆ ಕೆಮ್ಮು ಮತ್ತು ಶೀತದ ಸಿರಪ್ ನೀಡುವಂತಿಲ್ಲ. ೨ ರಿಂದ ೫ ವರ್ಷದ ಮಕ್ಕಳಿಗೆ ತಜ್ಞರ ಸಲಹೆ ಮೇರೆಗೆ ಔಷಧಿ ನೀಡಬೇಕು. ೫ ವರ್ಷ ಮೇಲ್ಪಟ್ಟ ಮಕ್ಕಳಿಗೆ ವೈದ್ಯರ ಸಲಹೆ ಮೇರೆಗೆ ಔಷಧಿ ನೀಡಬೇಕು. ಕಡಿಮೆ ಅವಧಿಗೆ ಕನಿಷ್ಠ ಅಗತ್ಯವಿರುವ ಡೋಸ್ ಬಳಸಬೇಕು. ಮಲ್ಟಿಮೆಡಿಸನ್ ಒಳಗೊಂಡ ಸಿರಪ್‌ಗಳನ್ನು ಬಳಸಬಾರದು ಎಂದು ಸೂಚಿಸಿದೆ. ವೈದ್ಯರ ಸಲಹೆ ಇಲ್ಲದೆ ಕೆಮ್ಮಿನ ಸಿರಪ್‌ಗಳನ್ನು ಖರೀದಿಸಬಾರದು ಹಾಗೂ ಬಳಸಬಾರದು. ಈ ಹಿಂದೆ ಬಳಸಿದ ಔಷಧಿಗಳನ್ನು ಮರುಬಳಕೆ

ಮಾಡಬಾರದು. ಕೆಮ್ಮು ಉಲ್ಬಣಗೊಂಡರೆ ವೈದ್ಯರನ್ನು ಸಂಪರ್ಕಿಸುವಂತೆ ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

**************

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ  ಇದುವರೆಗೂ ೧೩ ಸಾವಿರ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕೊಪ್ಪಳ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ೨ ಸಾವಿರ ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು,  ಕೃಷ್ಣ ಮೇಲ್ದಂಡೆ ವಿಚಾರದಲ್ಲಿ ರೈತರಿಗೆ ೮೦ ಸಾವಿರ ಕೋಟಿ ಪರಿಹಾರ ಕೊಡುತ್ತಾ ಇರುವುದೂ ಇದೇ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಎಂದು ಸಮರ್ಥಿಸಿಕೊಂಡಿದ್ದಾರೆ. ತಲಾ ಆದಾಯದಲ್ಲಿ ಇಡೀ ದೇಶದಲ್ಲಿ ಕನ್ನಡಿಗರೇ ನಂಬರ್ ಒನ್. ಇದು ನಮ್ಮ ಸರ್ಕಾರದ ಆರ್ಥಿಕ ಸಾಧನೆ ಎಂದು ಶ್ಲಾಘಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

೧೫ನೇ ಹಣಕಾಸು ಆಯೋಗದಿಂದಲೂ ರಾಜ್ಯಕ್ಕೆ ಅನ್ಯಾಯ ಆಗುತ್ತಿದ್ದು ಸಂಸದರು ಮಾತನಾಡುತ್ತಿಲ್ಲ ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ.

**************

ರಾಜ್ಯದಲ್ಲಿ ೧೮ ಸಾವಿರದ ೫೦೦ಕ್ಕೂ ಅಧಿಕ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗಳ ಸಿದ್ಧತೆ ನಡೆಯುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್. ಮಧು ಬಂಗಾರಪ್ಪ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಸರಕಾರಿ ಶಾಲೆಗಳಿಗೆ ೧೩ ಸಾವಿರ ಶಿಕ್ಷಕರು ಹಾಗೂ ಅನುದಾನಿತ ಶಾಲೆಗಳಿಗೆ ಸುಮಾರು ೫ ಸಾವಿರದ ೮೦೦ ಶಿಕ್ಷಕರ ನೇಮಕವಾಗಲಿದೆ. ಜಸ್ಟಿಸ್ ನಾಗಮೋಹನ್ ದಾಸ್ ವರದಿಯ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿ ಸ್ವಲ್ಪ ವಿಳಂಬವಾಗಿತ್ತು ಎಂದು ಹೇಳಿದ್ದಾರೆ.  ಮೂರು ಹಂತದ ಪರೀಕ್ಷಾ ಪದ್ಧತಿಯೂ ಮಕ್ಕಳ ಫಲಿತಾಂಶವನ್ನು ಉತ್ತಮ ಪಡಿಸಲು ಸಹಕಾರಿಯಾಗಿದೆ. ಈ ಪರೀಕ್ಷಾ ವ್ಯವಸ್ಥೆಯಿಂದ ೨ನೆ ಸ್ತರ ಹಾಗೂ ೩ನೆ ಸ್ತರದ ಎಸೆಸೆಲ್ಸಿ ಪರೀಕ್ಷೆಯಲ್ಲಿ ೧೧ ಸಾವಿರದ ೬೦೦೦ ಮಕ್ಕಳು

ಉತ್ತೀರ್ಣರಾಗಿದ್ದು, ಪಿಯುಸಿಯಲ್ಲಿಯೂ ೫೬ ಸಾವಿರಕ್ಕೂ ಅಧಿಕ ಮಕ್ಕಳು ಉತ್ತೀರ್ಣರಾಗಿದ್ದಾರೆ ಎಂದು ತಿಳಿಸಿದ್ದಾರೆ.

**************

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕಿನ ಲಕ್ಕವಳ್ಳಿ ಗ್ರಾಮದಲ್ಲಿಂದು ನೂತನವಾಗಿ ನಿರ್ಮಿಸಲಾಗಿರುವ ೩೦ ಹಾಸಿಗೆಗಳ ಸರ್ಕಾರಿ ಆಸ್ಪತ್ರೆಯನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟಿಸಿದರು. ಇದಕ್ಕೂ ಮುನ್ನ ಕಡೂರು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದ ಸಚಿವರು ಆಸ್ಪತ್ರೆಯಲ್ಲಿ ಶುಚಿತ್ವ ಕಾಪಾಡುವಂತೆ ಸೂಚಿಸಿದರು. ಹೆರಿಗೆ ಸಮಯದಲ್ಲಿ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ತಾಯಿ ಮಗುವಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**************

ಭಾರತ ಸರ್ಕಾರದ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯದ ವತಿಯಿಂದ ಬೆಂಗಳೂರಿನಲ್ಲಿ ಇಂದು ದಕ್ಷಿಣ ವಲಯದ ವಕ್ಫ್ ಮಂಡಳಿಗಳಿಂದ ಉಮೀದ್ ಪರಿಶೀಲನಾ ಸಭೆ ನಡೆಯಿತು. ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ ರಾಜ್ಯಗಳ ಪ್ರತಿನಿಧಿಗಳು ಭಾಗವಹಿಸಿ, ತಮ್ಮ ಅಭಿಪ್ರಾಯ ಮಂಡಿಸಿದರು. ಸಭೆಯಲ್ಲಿ ಇತ್ತೀಚೆಗೆ ಪ್ರಾರಂಭಿಸಲಾದ ಉಮೀದ್ ಸೆಂಟ್ರಲ್ ಪೋರ್ಟಲ್ ಮೂಲಕ ವಕ್ಫ್ ಆಸ್ತಿಗಳ ಸಮರ್ಥ ನಿರ್ವಹಣೆ, ಪ್ರಗತಿ, ಉತ್ತರದಾಯಿತ್ವ ಖಚಿತಪಡಿಸಿಕೊಳ್ಳುವ ಕುರಿತು ಚರ್ಚಿಸಲಾಯಿತು. ೨೦೨೫ರ ಜೂನ್‌ನಲ್ಲಿ ಉಮೀದ್ ಪೋರ್ಟಲ್ ಆರಂಭವಾದಾಗಿನಿಂದ ದೇಶಾದ್ಯಂತ ವಕ್ಫ್ ಮಂಡಳಿಗಳು ಎಲ್ಲಾ ವಕ್ಫ್ ಆಸ್ತಿ ವಿವರಗಳನ್ನು ಆರು ತಿಂಗಳೊಳಗೆ ಅಪ್ಲೋಡ್ ಮಾಡುವುದನ್ನು ಕಡ್ಡಾಯಗೊಳಿಸಲಾಗಿದ್ದು, ದಕ್ಷಿಣ ಭಾರತದ ರಾಜ್ಯಗಳು ಈಗಾಗಲೇ ಈ ಕಾರ್ಯವನ್ನು ಕೈಗೊಂಡಿವೆ. ಮುಂದಿನ ದಿನಗಳಲ್ಲಿ ಈ ಕಾರ್ಯವನ್ನು ಮತ್ತಷ್ಟು ಚುರುಕುಗೊಳಿಸುವುದಾಗಿ ವಿವಿಧ ರಾಜ್ಯಗಳ ಪ್ರತಿನಿಧಿಗಳು ತಿಳಿಸಿದರು. ವಿವಿಧ ರಾಜ್ಯಗಳ ಪ್ರತಿನಿಧಿಗಳು ಸ್ಥಳೀಯ ಭಾಷೆಯಲ್ಲಿ ಪೋರ್ಟಲ್ ಅನ್ನು ರಚನೆ ಮಾಡಲು ಮನವಿ ಮಾಡಿದರು.

**************

ರಾಜ್ಯದ ಎಲ್ಲಾ ಸಮುದಾಯಗಳು ಮತ್ತು ಧರ್ಮಗಳನ್ನು ರಕ್ಷಿಸುವುದು ಸರ್ಕಾರದ ಪ್ರಮುಖ ಕರ್ತವ್ಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮೆಟ್ರೋ ನಿಲ್ದಾಣಕ್ಕೆ ಬಸವೇಶ್ವರರ ಹೆಸರಿಡುವುದನ್ನು ಸ್ವಾಗತಿಸಲಾಗುವುದು ಎಂದು ಹೇಳಿದ್ದಾರೆ. ಎಲ್ಲಾ ಸಮುದಾಯಗಳಲ್ಲಿ ಆರ್ಥಿಕವಾಗಿ, ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದವರಿದ್ದು ಸರ್ಕಾರ ಇವರಿಗೆ ನ್ಯಾಯ ಒದಗಿಸಬೇಕು. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಯಾಕೆ ಇಷ್ಟು ಆತುರದಲ್ಲಿದ್ದಾರೆ" ಎಂದು ಪ್ರಶ್ನಿಸಿದ್ದಾರೆ.

**************

ಭಾರತೀಯ ಹತ್ತಿ ನಿಗಮ-ಸಿಸಿಐ, ಧಾರವಾಡದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕಪಾಸ್ ಕಿಸಾನ್ ಮೊಬೈಲ್ ಅಪ್ಲಿಕೇಶನ್ ಮೂಲಕ ಹತ್ತಿ ಖರೀದಿ ಕೈಗೊಳ್ಳಲಿದೆ. ರೈತರು ಅಕ್ಟೋಬರ್ ೩೧ ರೊಳಗಾಗಿ ಸ್ವಯಂ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಕನಿಷ್ಠ ಬೆಂಬಲ ಬೆಲೆಯಡಿಯಲ್ಲಿ ಖರೀದಿ ಪ್ರಕ್ರಿಯೆ ಇದೇ ೨೧ ರಿಂದ ಪ್ರಾರಂಭವಾಗಲಿವೆ. ರಾಜ್ಯದ ರೈತರು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತಮ್ಮ ಹತ್ತಿಯನ್ನು ಭಾರತೀಯ ಹತ್ತಿ ನಿಗಮಕ್ಕೆ ಮಾರಾಟ ಮಾಡಲು ಕಪಾಸ್ ಕಿಸಾನ್ ಮೊಬೈಲ್ ಅಪ್ಲಿಕೇಶನ್ ನಲ್ಲಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ. ರೈತರು ನೋಂದಣಿ ಪ್ರಕ್ರಿಯೆಯನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸುವಂತೆ ಭಾರತೀಯ ಹತ್ತಿ ನಿಗಮದ ಶಾಖಾ ಮುಖ್ಯಸ್ಥರು ತಿಳಿಸಿದ್ದಾರೆ.

**************

ಆಗ್ನೇಯ ಪದವೀಧರರ ಕ್ಷೇತ್ರಕ್ಕೆ ಒಳಪಡುವ ದಾವಣಗೆರೆ, ಹರಿಹರ ಮತ್ತು ಜಗಳೂರು ತಾಲ್ಲೂಕುಗಳಲ್ಲಿ ಪದವೀಧರ ಮತದಾರರ ಪಟ್ಟಿ ಸಿದ್ದಪಡಿಸುವ ಕಾರ್ಯ ಆರಂಭವಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಪಶ್ಚಿಮ ಪದವೀಧರರ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಹೊಸದಾಗಿ ಮತದಾರ ಪಟ್ಟಿಗಳ ತಯಾರಿಕೆ ಕುರಿತಂತೆ ಕೇಂದ್ರ ಚುನಾವಣಾ ಆಯೋಗ ಮತದಾರ ಪಟ್ಟಿ ತಯಾರಿಸಲು ವೇಳಾಪಟ್ಟಿ ಹೊರಡಿಸಿದೆ ಎಂದು ಗದಗ ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನವೆಂಬರ್ ೧ ಅರ್ಹತಾ ದಿನಾಂಕಕ್ಕಿಂತ ಮೂರು ವರ್ಷ

ಮುಂಚೆ ಪದವಿ ಪೂರ್ಣಗೊಳಿಸಿದ ಅರ್ಹ ವ್ಯಕ್ತಿಯು ಪದವೀಧರ ಮತದಾರರಾಗಿ ಹೆಸರು ನೋಂದಣಿ ಮಾಡಲು ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದ್ದಾರೆ.

**************

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿಂದು ಸಂಭ್ರಮ ಹಾಗೂ ಭಕ್ತಿಯಿಂದ ರಥೋತ್ಸವ ನೆರವೇರಿತು. ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವ ಮುಗಿದ ನಾಲ್ಕು ದಿನಗಳ ಹಿನ್ನೆಲೆಯಲ್ಲಿ ಬೆಳಗ್ಗೆ ಚಾಮುಂಡಿ ಬೆಟ್ಟದಲ್ಲಿ ರಾಜವಂಶಸ್ಥ ಹಾಗೂ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಕುಟುಂಬದವರೊಂದಿಗೆ ಪೂಜೆ ಸಲ್ಲಿಸಿದರು. ಈ ವೇಳೆ ರಥ ಎಳೆಯುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು. ರಥೋತ್ಸವದಲ್ಲಿ ಪೊಲೀಸ್ ಬ್ಯಾಂಡ್ ಹಾಗೂ ಸಿಡಿಮದ್ದುಗಳನ್ನು ಸಿಡಿಸಲಾಯಿತು. ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ ಸೇರಿದಂತೆ ತಮಿಳುನಾಡು, ಕೇರಳ ಆಂಧ್ರಪ್ರದೇಶಗಳಿಂದ ಸಾವಿರಾರು ಭಕ್ತಾದಿಗಳು ರಥೋತ್ಸವಕ್ಕೆ ಸಾಕ್ಷಿಯಾದರು. ಬಳಿಕ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸಕಾಲಕ್ಕೆ ಮಳೆ ಬೆಳೆ ಬಂದು ರೈತಾಪಿ ವರ್ಗದ ಜನರು ಉತ್ತಮ ಬೆಳೆ ಬೆಳೆಯಲಿ ಹಾಗೂ ರಾಜ್ಯದ ಜನರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಲಿ ಎಂದು ದೇವರಲ್ಲಿ ಪ್ರಾರ್ಥಿಸಲಾಗಿದೆ ಎಂದು ಹೇಳಿದ್ದಾರೆ.

**************

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪೌತಿ ಖಾತಾ ಆಂದೋಲನ ಪ್ರಾರಂಭಿಸಲಾಗಿದ್ದು, ೪೫ ದಿನಗಳಲ್ಲಿ ಜಿಲ್ಲೆಯಲ್ಲಿ ಪೌತಿಖಾತೆ ಆಂದೋಲನ ಮುಗಿಸುವ ಗುರಿ ಹೊಂದಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಕೃಷಿ ಜಮೀನಿನ ಮಾಲೀಕತ್ವ ಮೃತ ವ್ಯಕ್ತಿಗಳ ಹೆಸರಿನಲ್ಲಿ ಇದ್ದರೆ ಅಂತಹ ಜಮೀನುಗಳ ಸ್ವಾಧೀನಾನುಭವ ಹೊಂದಿದ್ದರೂ ಸಹ, ಕುಟುಂಬಸ್ಥರಿಗೆ ಜಮೀನು ಅಭಿವೃದ್ಧಿಪಡಿಸಲು ಸಾಲ ಸೌಕರ್ಯ ಸೇರಿದಂತೆ ಸರ್ಕಾರದ ಯಾವುದೇ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಪ್ರಕೃತಿ ವಿಕೋಪದಿಂದ ಫಸಲು ನಾಶವಾದಾಗ ರೈತರಿಗೆ ಸರ್ಕಾರದಿಂದ ನೀಡಲಾಗುವ ವಿಮೆ, ಪರಿಹಾರವನ್ನು ಪಡೆಯುವುದು ದುಸ್ತರವಾಗಲಿದೆ. ರೈತರಿಗೆ ಈ ಸಮಸ್ಯೆಗಳನ್ನು ನಿವಾರಣೆ ಮಾಡಿಕೊಡುವ ಸಲುವಾಗಿ ಜಿಲ್ಲೆಯ

ನಾಲ್ಕು ತಾಲ್ಲೂಕುಗಳಲ್ಲೂ ಪೌತಿ ಖಾತೆ ಆಂದೋಲನ ಪ್ರಾರಂಭಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

**************

ಕರಾವಳಿ ಹಾಗೂ ಉತ್ತರ ಒಳನಾಡಿನ ಒಂದೆರಡು ಕಡೆ ಇಂದು ಮಳೆಯಾಗಿದೆ.  ಬೀದರ್ ಭಾಲ್ಕಿ, ಕೋಲಾರದಲ್ಲಿ ೭ ಸೆಂಟಿ ಮೀಟರ್ ಬೆಂಗಳೂರಿನಲ್ಲಿ ೪ ಸೆಂಟಿಮೀಟರ್ ಮಳೆಯಾಗಿದೆ. ಇಂದಿನಿಂದ ರಾಜ್ಯದ ವಿವಿಧೆಡೆ ಭಾರೀ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಡಾ. ಸಿ. ಎಸ್ ಪಾಟೀಲ್ ಆಕಾಶವಾಣಿಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲೂ ಇಂದಿನಿಂದ ಇದೇ ೧೨ವರೆಗೆ ಕೆಲವೆಡೆ ಮಳೆಯಾಗಲಿದೆ ಎಂದು ಮುನ್ನೆಚ್ಚರಿಕೆ ನೀಡಿದ್ದಾರೆ.

ಧ್ವನಿ : ಡಾ. ಸಿ. ಎಸ್ ಪಾಟೀಲ್, ಹವಮಾನ ಇಲಾಖೆ ನಿರ್ದೇಶಕ

**************